<u>ಅಸಲು ದಾವಾ **181/2023**</u> ಪಿ.ಡಬ್ಲ್ಯೂ:- **1**

ದಿನಾಂಕಃ **28-11-2024** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ:- ವಾದಿಗಳ ಪರ ವಕೀಲರಿಂದ:-</u>

ನಾನು ಈ ದಾವೆಯಲ್ಲಿ ವಾದಿಯ ಪರ ಮುಖ್ತಾರನಾಮೆಯನ್ನು ಸಲ್ಲಿಸುತ್ತಿದ್ದು, ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದಾಗಿದೆ.

ಆರ್ ಟಿ ಸಿ ಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**1** ಎಂದು, ಮುಟೇಷನ್ ನ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**2** ಎಂದು, ನಮೂನೆ 5 ರ ಮೂರು ದೃಢೀಕೃತ ನಕಲುಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ನಿಪಿ-**3** ರಿಂದ **5** ಎಂದು, ಆಕಾರ ಬಂಧಿನ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**6** ಎಂದು, ಸರ್ವೇ ನಕ್ಷೆಯ ಮಹಜರ್ ಮತ್ತು ನೊಟೀಸಿನ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ನಿಪಿ-**7** ರಿಂದ **9** ಎಂದು, 3 ಗಣಕೀಕೃತ ಆರ್ ಟಿ ಸಿ ಯನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ನಿಪಿ- **10** ರಿಂದ **12** ಎಂದು, ಮುಖ್ತಾರನಾಮೆಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**13** ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಯನ್ನು ಕೋರಿಕೆಯ ಮೇರೆಗೆ ಮುಂದೂಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.